ವಿಜಯವಾಣಿ ನಂ 1



ಭಾನುವಾರ ಸಂಜೆ ಹುಬ್ಬಳ್ಳಿ ಯುಗಾದಿ ಉತ್ಸವದ ತೋಳನಕೆರೆ ಎದುರಿನ ಮುಖ್ಯ ವೇದಿಕೆ ಕಾರ್ಯಕ್ರಮವನ್ನು ಅಡಿಕೆ ಸಿಂಗಾರ ಅರಳಿಸುವ ಮೂಲಕ ಶ್ರೀ ಅಭಿನವ ಮೃತ್ಯುಂಜಯ ಸ್ವಾಮೀಜಿ ಉದ್ಘಾಟಿಸಿದರು. ಮಾಜಿ ಸಿಎಂ ಜಗದೀಶ ಶೆಟ್ಟರ್, ಸಭಾಪತಿ ಬಸವರಾಜ ಹೊರಟ್ಟಿ, ಸಚಿವ ಶಂಕರ ಪಾಟೀಲ ಮುನೇನಕೊಪ್ಪ, ವಿಪ ಸದಸ್ಯ ಪ್ರದೀಪ ಶೆಟ್ಟರ್, ವಿಜಯವಾಣಿ ಹುಬ್ಬಳ್ಳಿ ಆವೃತ್ತಿ ಸ್ಥಾನಿಕ ಸಂಪಾದಕ ಪ್ರಕಾಶ ಶೇಟ್ ಇದ್ದರು.

Hubli Edition
Mar 20, 2023 Page No. 2
Powered by : eReleGo.com

ವಿಜಯವಾಣಿ
ನಂ 1

### ಸಚಿವ ಜೋಶಿ ಅಭಿಪ್ರಾಯ | ಉಪ್ಪಿನಬೆಟಗೇರಿ ಶಾಲೆ ಶತಮಾನೋತ್ತರ ಸುವರ್ಣ ಮಹೋತ್ಸವ

# ವಿದ್ಯಾರ್ಥಿಗಳ ಕೌಶಲ ಬೆಳವಣಿಗೆಗೆ ಎನ್‌ಇಪಿ ಅವಶ್ಯ

**ಉಪ್ಪಿನಬೆಟಗೇರಿ:** ಸರ್ಕಾರಿ ಶಾಲೆಗೆ 157 ವರ್ಷಗಳಲ್ಲಿ ಈ ಶಾಲೆಯು ಎಷ್ಟು ವಿದ್ಯಾರ್ಥಿಗಳನ್ನು ಸಮಾಜಕ್ಕೆ ಕೊಡುಗೆಯಾಗಿ ನೀಡಿದೆ ಎಂದರೆ ಇದು ಇತಿಹಾಸದಲ್ಲಿ ನೆನಪಿಡಬೇಕಾದ ಸಂಗತಿ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ, ಕಲ್ಲಿದ್ದಲು ಮತ್ತು ಗಣಿ ಸಚಿವ ಪ್ರಲ್ಹಾದ ಜೋಶಿ ಹೇಳಿದರು.

ಉಪ್ಪಿನಬೆಟಗೇರಿ ಗ್ರಾಮದ ಸರ್ಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಪ್ರಾಥಮಿಕ ಶಾಲೆ ಆವರಣದಲ್ಲಿ ಭಾನುವಾರ ಆಯೋಜಿಸಿದ್ದ ಶಾಲೆಯ ಶತಮಾನೋತ್ತರ ಸುವರ್ಣ ಮಹೋತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ವಿದ್ಯಾರ್ಥಿಗಳಿಗೆ ಸಮಗ್ರ ಕೌಶಲ ಬೆಳವಣಿಗೆಗೆ ಅವಶ್ಯಕತೆ ಇರುವ ಅಂಶಗಳನ್ನು ಅಳವಡಿಕೆ ಮಾಡಿದೆ. ಜಗತ್ತಿನಲ್ಲಿ ಹೆಚ್ಚು ಯುವ ಸಮುದಾಯವನ್ನು ಹೊಂದಿರುವ ದೇಶ ಭಾರತವಾಗಿದೆ. ದೇಶದಲ್ಲಿ ಶೇ. 65ರಷ್ಟು ಯುವಜನರಿದ್ದಾರೆ. ದೇಶದ ಬೆಳವಣಿಗೆಗೆ ವಿದ್ಯಾರ್ಥಿಗಳಲ್ಲಿ ಕೌಶಲವನ್ನು ಬೆಳೆಸಬೇಕಾಗಿದೆ. ಅದಕ್ಕಾಗಿಯೇ ಎನ್‌ಇಪಿ ಅಳವಡಿಕೆ ಮಾಡಿಕೊಳ್ಳಲಾಗಿದೆ ಎಂದರು.



ಉಪ್ಪಿನಬೆಟಗೇರಿ ಗ್ರಾಮದ ಸರ್ಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಪ್ರಾಥಮಿಕ ಶಾಲೆ ಶತಮಾನೋತ್ತರ ಸುವರ್ಣ ಮಹೋತ್ಸವ ಕಾರ್ಯಕ್ರಮವನ್ನು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಉದ್ಘಾಟಿಸಿದರು. ಸಭಾಪತಿ ಬಸವರಾಜ ಹೊರಟ್ಟಿ, ಶಾಸಕ ಅಮೃತ ದೇಸಾಯಿ, ತವನಪ್ಪ ಅಷ್ಟಗಿ, ಸೀಮಾ ಮಸೂತಿ ಇತರರಿದ್ದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸ್ಮರಣ ಸಂಚಿಕೆ ಬಿಡುಗಡೆ ಮಾಡಿದರು. ಕುಮಾರ ವಿರೂಪಾಕ್ಷ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಶಾಸಕ ಅಮೃತ ದೇಸಾಯಿ, ಮಾಜಿ ಶಾಸಕಿ ಸೀಮಾ ಮಸೂತಿ, ಶತಮಾನೋತ್ತರ ಸುವರ್ಣ ಮಹೋತ್ಸವ ಸಮಿತಿ ಅಧ್ಯಕ್ಷ ತವನಪ್ಪ ಅಷ್ಟಗಿ ಮಾತನಾಡಿದರು. ಜಿಪಂ ಮಾಜಿ ಸದಸ್ಯೆ ಕಸ್ತೂರಿ ಅಷ್ಟಗಿ, ಪಿಕೆಪಿಎಸ್ ಅಧ್ಯಕ್ಷ ರಾಮಲಿಂಗಪ್ಪ ನವಲಗುಂದ, ಚನಬಸಪ್ಪ ಮಸೂತಿ, ವೀರಣ್ಣ ಪರಾಂಡೆ, ರವೀಂದ್ರ ಯಲಿಗಾರ, ಕಲ್ಲಪ್ಪ ಪುಡಕಲಕಟ್ಟಿ, ಮಂಜುನಾಥ ಸಂಕಣ್ಣವರ, ಗಿರೀಶ ಪದಕಿ, ಸುರೇಶ ಹುಗ್ಗಿ, ಕಾಶಪ್ಪ ದೊಡವಾಡ, ಗ್ರಾಪಂ ಅಧ್ಯಕ್ಷೆ ಸಾಯಿರಾಬಾನು ಲಾಲ್ಮಿಯಾ, ಉಪಾಧ್ಯಕ್ಷೆ ವಿದ್ಯಾ ಲೋಲಿ ಹಾಗೂ ಸದಸ್ಯರು ಹಾಗೂ ಸಮಿತಿ ಸದಸ್ಯರು, ಗ್ರಾಮಸ್ಥರು ಉಪಸ್ಥಿತರಿದ್ದರು.

ಸಂಜೆ ನೆನೆ ನೆನೆ ಆ ದಿನ, ಉಪ್ಪಿನಬೆಟಗೇರಿ ಗ್ರಾಮದ ಹಿರಿಮೆ-ಗರಿಮೆ, ನಮ್ಮ ಶಾಲೆ-ನಮ್ಮೂರ ಹೆಮ್ಮೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಉಪ್ಪಿನಬೆಟಗೇರಿಯ ಸಾಧನೆಯ ಹೆಜ್ಜೆ ಗುರುತುಗಳು ಎಂಬ ಚಿಂತನಾ ಗೋಷ್ಠಿಗಳು ಜರುಗಿದವು.